# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1019 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 18.12.2024 |
| ಉತ್ತರಿಸುವ ಸಚಿವರು | : | ಕಂದಾಯ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಮಾಜಿ ಸೈನಿಕರ ಸಂಖ್ಯೆ ಎಷ್ಟು; ಮಾಜಿ ಸೈನಿಕರು ಹಾಗೂ ಅವರ ಅವಲಂಬಿತ ಕುಟುಂಬದ ಎಷ್ಟು ಜನರು ಭೂ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದ್ದಾರೆ; (ವಿಧಾನಸಭಾವಾರು ಮಾಹಿತಿ ಒದಗಿಸುವುದು) | ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಆ) | ಎಷ್ಟು ಅರ್ಜಿಗಳನ್ನು ಈವರೆಗೆ ವಿಲೇವಾರಿ ಮಾಡಲಾಗಿದೆ; ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಒಂದು ವೇಳೆ ತಿರಸ್ಕೃತವಾಗಿದ್ದಲ್ಲಿ ಅದಕ್ಕೆ ಕಾರಣಗಳೇನು? | ವಿಲೇವಾರಿ ಮಾಡಿರುವ ಮತ್ತು ಬಾಕಿ ಉಳಿದಿರುವ ಅರ್ಜಿಗಳ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.<br><br>ಅರ್ಜಿಗಳನ್ನು ತಿರಸ್ಕರಿಸಿರುವುದಕ್ಕೆ ಕಾರಣಗಳು.<br><br>1. ಮಾಜಿ ಸೈನಿಕರಿಗೆ ವ್ಯವಸಾಯ ಉದ್ದೇಶಕ್ಕಾಗಿ ಭೂ ಮಂಜೂರಾತಿ ಮಾಡಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(1)ರಡಿ ಹಾಗೂ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ (3)ರಡಿ ಜಮೀನು ಲಭ್ಯವಿಲ್ಲದ ಕಾರಣ ಅರ್ಜಿದಾರರಿಗೆ ಹಿಂಬರಹ ನೀಡಿ ವಿಲೆಗೊಳಿಸಲಾಗಿದೆ.<br><br>2. ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969ರ ನಿಯಮ 3 ರಂತೆ ಪ್ರತಿ ಗ್ರಾಮದಲ್ಲಿ ಲಭ್ಯವಿರುವ ಸರ್ಕಾರಿ ಜಮೀನುಗಳನ್ನು ಪ್ರತಿ ವರ್ಷ ಜುಲೈ ಮಾಹೆಯಲ್ಲಿ ಪ್ರಚುರಪಡಿಸಿ ಭೂ ಲಭ್ಯತಾ ಪಟ್ಟಿಯಂತೆ ಸರ್ಕಾರಿ ಜಮೀನು ಲಭ್ಯವಿಲ್ಲದೇ ಇರುವುದರಿಂದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ.<br><br>3. ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 8 (8) ರನ್ವಯ ಸೈನಿಕ/ಮಾಜಿ ಸೈನಿಕರು ಸರ್ಕಾರಿ ಜಮೀನು ಮಂಜೂರು ಮಾಡಲು ಸರ್ಕಾರವು ನಿಗದಿಪಡಿಸಿರುವ |

| | | |
|---|---|---|
| | | ನಮೂನೆಯಲ್ಲಿ ಅರ್ಜಿಯನ್ನು ಸಂಬಂಧಪಟ್ಟ ತಾಲ್ಲೂಕಿನಲ್ಲಿ ಸಲ್ಲಿಸದೇ ಇರುವುದರಿಂದ ತಿರಸ್ಕರಿಸಲಾಗಿದೆ.<br><br>4. ಅರ್ಜಿದಾರರು ಒಟ್ಟು ಕುಟುಂಬದ ವಾರ್ಷಿಕ ಆದಾಯದ ಬಗ್ಗೆ ದೃಢೀಕೃತ ದಾಖಲೆಗಳನ್ನು ಸಲ್ಲಿಸದೇ ಇರುವುದರಿಂದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ. |
| ಇ) | ಬಾಕಿ ಉಳಿದ ಅರ್ಜಿಗಳ ವಿಲೇವಾರಿಗೆ ಯಾವಾಗ ಕ್ರಮ ಕೈಗೊಳ್ಳಲಾಗುವುದು; | ಸೈನಿಕ / ಮಾಜಿ ಸೈನಿಕರಿಗೆ ಜಮೀನು /ನಿವೇಶನ ಮಂಜೂರಾತಿಗಾಗಿ ಸಲ್ಲಿಕೆಯಾಗುವ ಅರ್ಜಿಗಳನ್ನು ಇತ್ಯರ್ಥಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸುವಂತೆ ಎಲ್ಲಾ ಜಿಲ್ಲಾಧಿಕಾರಿಳಿಗೆ ಸರ್ಕಾರದ ಪತ್ರ ಸಂಖ್ಯೆ ಆರ್‌ಡಿ 21 ಎಲ್‌ಜಿಪಿ 2024 ದಿನಾಂಕ: 20.09.2024 ರಂದು ಸೂಚನೆಗಳನ್ನು ನೀಡಲಾಗಿದೆ.<br>1. ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 8(8)ರನ್ವಯ ಸೈನಿಕ/ಮಾಜಿ ಸೈನಿಕರಿಗೆ ಅವರ ಸೇವಾ ರಿಜಿಸ್ಟರ್‌ನಲ್ಲಿ ನಮೂದಿಸಿರುವ ಸ್ಥಳೀಯ ತಾಲ್ಲೂಕಿನಲ್ಲಿ ಅಥವಾ ಸಂಬಂಧಪಟ್ಟ ಜಿಲ್ಲೆಯಲ್ಲಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ (3)ರಡಿ ಪ್ರಕಟಿಸಿರುವ ಭೂ ಲಭ್ಯತಾ ಪಟ್ಟಿಯಂತೆ ಸರ್ಕಾರಿ ಜಮೀನು ಲಭ್ಯವಿದ್ದಲ್ಲಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮಗಳನ್ವಯ ಉಚಿತವಾಗಿ ಮಂಜೂರು ಮಾಡಲು ನಿಯಮಾನುಸಾರ ಕ್ರಮವಹಿಸುವುದು.<br><br>2. ಸೈನಿಕ/ಮಾಜಿ ಸೈನಿಕರಿಗೆ ಅವರ ಸೇವಾ ರಿಜಿಸ್ಟರ್‌ನಲ್ಲಿ ನಮೂದಿಸಿರುವ ಸ್ಥಳೀಯ ತಾಲ್ಲೂಕಿನಲ್ಲಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಅರ್ಜಿಯನ್ನು ಅದೇ ಜಿಲ್ಲೆಯ ಯಾವುದಾದರೂ ತಾಲ್ಲೂಕಿಗೆ ಮಾತ್ರ ವರ್ಗಾಯಿಸಲು ನಿಯಮ 8(8)ರಡಿ ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಜಿಲ್ಲಾಧಿಕಾರಿಯವರು ಸಂಬಂಧಪಟ್ಟ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಯಾವುದಾದರು ತಾಲ್ಲೂಕಿನಲ್ಲಿ ಮಂಜೂರಾತಿಗಾಗಿ ಜಮೀನು ಲಭ್ಯವಿದ್ದಲ್ಲಿ ಮಂಜೂರು ಮಾಡಲು ಕ್ರಮವಹಿಸುವುದು.<br><br>3. ಒಂದು ವೇಳೆ ಅರ್ಜಿದಾರರು ಕೋರಿರುವ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಲಭ್ಯವಿಲ್ಲದ ಪಕ್ಷದಲ್ಲಿ ಬೆಂಗಳೂರು ನಗರ ಜಿಲ್ಲೆಯನ್ನು ಹೊರತುಪಡಿಸಿ, ನಗರ ಪ್ರದೇಶದಲ್ಲಿ 1200 |

| | | |
|---|---|---|
| | | ಚದರ ಅಡಿ ವಿಸ್ತೀರ್ಣದ ನಿವೇಶನವನ್ನು ಅಥವಾ ಗ್ರಾಮೀಣ ಪ್ರದೇಶದಲ್ಲಿ 2400 ಚದರ ಅಡಿ ವಿಸ್ತೀರ್ಣದ ನಿವೇಶನವನ್ನು ಜಾರಿಯಲ್ಲಿರುವ ಸರ್ಕಾರದ ಯಾವುದೇ ವಸತಿ ಯೋಜನೆಯಡಿಯಲ್ಲಿ ಅಥವಾ ಸರ್ಕಾರವು ರೂಪಿಸಬಹುದಾದ ಯಾವುದೇ ವಿಶೇಷ ಯೋಜನೆಯಡಿಯಲ್ಲಿ ನಿವೇಶನವನ್ನು ಮಂಜೂರು ಮಾಡಲು ನಿಯಮಾನುಸಾರ ಕ್ರಮವಹಿಸುವುದು.<br><br>4. ಬೆಂಗಳೂರು ನಗರ ಜಿಲ್ಲೆಯಲ್ಲಿ ಸೈನಿಕ/ಮಾಜಿ ಸೈನಿಕರಿಗೆ ಜಮೀನು / ನಿವೇಶನ ಮಂಜೂರು ಮಾಡಲು ಅವಕಾಶವಿಲ್ಲದೇ ಇರುವುದರಿಂದ ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಸೈನಿಕ / ಮಾಜಿ ಸೈನಿಕರ ಅರ್ಜಿಗಳನ್ನು ಮಾತ್ರ ಪಕ್ಕದ ಜಿಲ್ಲೆಗೆ ವರ್ಗಾಯಿಸುವಾಗ ಅರ್ಜಿದಾರರು ಇಚ್ಛಿಸಿದ ಬೆಂಗಳೂರು ಜಿಲ್ಲೆಗೆ ಹೊಂದಿಕೊಂಡಂತೆ ಇರುವ ಪಕ್ಕದ ಜಿಲ್ಲೆಗೆ ಅರ್ಜಿಯನ್ನು ವರ್ಗಾಯಿಸುವುದು. ಪಕ್ಕದ ಜಿಲ್ಲೆಯಲ್ಲಿ ಸರ್ಕಾರಿ ಜಮೀನು ಲಭ್ಯವಿದ್ದಲ್ಲಿ, ಜಿಲ್ಲಾಧಿಕಾರಿಯವರು ನಿಯಮಾನುಸಾರ ಜಮೀನನ್ನು ಮಂಜೂರು ಮಾಡುವುದು. ಒಂದುವೇಳೆ ಜಮೀನು ಲಭ್ಯವಿಲ್ಲದಿದ್ದಲ್ಲಿ, ನಿವೇಶನ ಮಂಜೂರು ಮಾಡಲು ಕ್ರಮವಹಿಸುವುದು. ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಅರ್ಜಿಗಳನ್ನು ಮಾತ್ರ ಪಕ್ಕದ ಜಿಲ್ಲೆಗೆ ವರ್ಗಾಯಿಸಲು ಅವಕಾಶವಿದೆ. ಉಳಿದ ಇತರ ಜಿಲ್ಲೆಯ ಅರ್ಜಿಗಳನ್ನು ಪಕ್ಕದ ಜಿಲ್ಲೆಗೆ ವರ್ಗಾಯಿಸಲು ಅವಕಾಶವಿರುವುದಿಲ್ಲ. |
| ಈ) | ಈಗಾಗಲೇ ಮಂಜೂರು ಮಾಡಿರುವ ಭೂಮಿಯಲ್ಲಿ ಕಾನೂನು ತೊಡಕುಗಳು ಕಂಡು ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ನಿವಾರಿಸಲು ಕ್ರಮಕೈಗೊಳ್ಳಲಾಗಿದೆಯೇ? | ಇಂತಹ ಗುರುತರವಾದ ದೂರುಗಳು ಬಂದಲ್ಲಿ ನಿಯಾಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು. |

ಸಂಖ್ಯೆ: ಆರ್‌ಡಿ 137 ಎಲ್‌ಜಿಕ್ಯೂ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

## ಅನುಬಂಧ-1

| ಕ್ರ.ಸಂ. | ಜಿಲ್ಲೆ | ಮಾಜಿ ಸೈನಿಕರ ಸಂಖ್ಯೆ | ಭೂ ಮಂಜೂರಾತಿಗಾಗಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ. | ವಿಲೇವಾರಿ ಮಾಡಿರುವ ಅರ್ಜಿಗಳ ಸಂಖ್ಯೆ | ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ |
|---|---|---|---|---|---|
| 1. | ಬೆಂಗಳೂರು ನಗರ | - | 160 | 160 | 0 |
| 2. | ಬೆಂಗಳೂರು ಗ್ರಾಮಾಂತರ | 80 | 298 | 170 | 128 |
| 3. | ಶಿವಮೊಗ್ಗ | 985 | 105 | 06 | 99 |
| 4. | ದಾವಣಗೆರೆ | - | 314 | 314 | 0 |
| 5. | ತುಮಕೂರು | 1572 | 871 | 871 | 0 |
| 6. | ಚಿತ್ರದುರ್ಗ | - | 341 | 302 | 39 |
| 7. | ರಾಮನಗರ | - | 91 | 91 | 0 |
| 8. | ಕೋಲಾರ | 311 | 383 | 20 | 363 |
| 9. | ಚಿಕ್ಕಬಳ್ಳಾಪುರ | - | 421 | 421 | 0 |
| 10. | ಮೈಸೂರು | 1049 | 1049 | 1032 | 17 |
| 11. | ಚಿಕ್ಕಮಗಳೂರು | - | 686 | 81 | 605 |
| 12. | ಉಡುಪಿ | 988 | 586 | 364 | 222 |
| 13. | ಕೊಡಗು | 4566 | 2024 | 15 | 2009 |
| 14. | ಮಂಡ್ಯ | 363 | 363 | 01 | 362 |
| 15. | ಚಾಮರಾಜನಗರ | 153 | 153 | 01 | 152 |
| 16. | ದಕ್ಷಿಣ ಕನ್ನಡ | 2281 | 377 | 238 | 139 |
| 17. | ಬೆಳಗಾವಿ | 23079 | 1872 | 05 | 1867 |
| 18. | ಗದಗ | - | 986 | 04 | 982 |
| 19. | ಧಾರವಾಡ | 6646 | 99 | 99 | 0 |
| 20. | ಬಾಗಲಕೋಟೆ | - | 1257 | 1257 | 0 |
| 21. | ಉತ್ತರಕನ್ನಡ | 1714 | 346 | 101 | 245 |
| 22. | ಹಾವೇರಿ | 91 | 91 | 11 | 80 |
| 23. | ವಿಜಯಪುರ | 2934 | 262 | 0 | 262 |
| 24. | ಕಲಬುರಗಿ | 746 | 81 | 0 | 81 |
| 25. | ಬೀದರ್ | 1402 | 76 | 0 | 76 |
| 26. | ಯಾದಗಿರಿ | - | 24 | 03 | 21 |
| 27. | ರಾಯಚೂರು | - | 96 | 78 | 18 |
| 28. | ಕೊಪ್ಪಳ | - | 236 | 202 | 34 |
| 29. | ಬಳ್ಳಾರಿ | - | 153 | 07 | 146 |
| 30. | ವಿಜಯನಗರ | - | 240 | 0 | 240 |
| 31. | ಹಾಸನ | 2317 | 2024 | 929 | 1095 |
| **ಒಟ್ಟು** | | | **16065** | **6783** | **9282** |